Akashvani : Bangalore
National Bulletin
Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

23.09.2024 13.10 hrs

<><*<><>*><>

ಮುಖ್ಯಾಂಶಗಳು

- ಭಾರತ ಜಗತ್ತಿನ ೩ನೇ ಅತಿದೊಡ್ಡ ಆರ್ಥಿಕತೆಯಾಗಿ ರೂಪುಗೊಳ್ಳುವತ್ತ ಸಾಗಿದೆ - ಪ್ರಧಾನಿ ನರೇಂದ್ರ ಮೋದಿ
- ಆಯುಷ್ಮಾನ್ ಭಾರತ್ ಯೋಜನೆಗೆ ೬ ವರ್ಷ ; ೭ ಕೋಟಿ ೭೯ ಲಕ್ಷ ಫಲಾನುಭವಿಗಳಿಗೆ ಸೌಲಭ್ಯ
- ಜಾರ್ಖಂಡ್ ವಿಧಾನಸಭಾ ಚುನಾವಣೆ ; ಸಿದ್ಧತೆ ಪರಿಶೀಲಿಸುತ್ತಿರುವ ಕೇಂದ್ರ ಚುನಾವಣಾ ಆಯೋಗ
- ಚೆಸ್ ಒಲಿಂಪಿಯಾಡ್‌ನಲ್ಲಿ ೨ ಚಿನ್ನದ ಪದಕ ಗೆದ್ದ ಭಾರತ ತಂಡಕ್ಕೆ ಪ್ರಧಾನಿ ಸೇರಿ ಗಣ್ಯರ ಅಭಿನಂದನೆ

<><*<><>*><>

ಭಾರತ ಜಗತ್ತಿನ ೩ನೇ ಅತಿದೊಡ್ಡ ಆರ್ಥಿಕತೆಯಾಗಿ ರೂಪುಗೊಳ್ಳುವತ್ತ ಸಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅಮೆರಿಕದ ನ್ಯೂಯಾರ್ಕ್‌ನಲ್ಲಿ ಸಿಇಒಗಳ ದುಂಡುಮೇಜಿನ ಸಭೆಯಲ್ಲಿ ಮಾತನಾಡಿದ ಅವರು, ಈ ನಿಟ್ಟಿನಲ್ಲಿ ಸರ್ವಪ್ರಯತ್ನಗಳು ನಡೆಯುತ್ತಿವೆ. ಭಾರತದ ಯಶೋಗಾಥೆಯಿಂದ ಸ್ಫೂರ್ತಿ ಪಡೆದು ಪಾಲುದಾರರಾಗಬೇಕು. ನಾವೀನ್ಯತೆಗೆ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು. ಜಗತ್ತಿನಲ್ಲಿ ಸಹ ಅಭಿವೃದ್ಧಿ, ಸಹ ವಿನ್ಯಾಸ ಮತ್ತು ಸಹ ಉತ್ಪಾದನೆಗೆ ಆದ್ಯತೆ ನೀಡಬೇಕಿದೆ. ಭಾರತದ ಆರ್ಥಿಕ ಮತ್ತು ತಂತ್ರಜ್ಞಾನ ಬೆಳವಣಿಗೆಯ ಅವಕಾಶಗಳನ್ನು ಬಳಸಿಕೊಳ್ಳಬೇಕು ಎಂದು ಹೇಳಿದರು. ಭಾರತ ಸೆಮಿಕಂಡಕ್ಟರ್ ವಲಯದಲ್ಲಿ ಜಾಗತಿಕ ತಾಣವಾಗಿ ಹೊರಹೊಮ್ಮಲು ಸಜ್ಜಾಗಿದೆ ಎಂದು ಹೇಳಿದರು. ಇದಕ್ಕೂ ಮುನ್ನ ಪ್ರಧಾನಮಂತ್ರಿಯವರು ಪ್ಯಾಲೆಸ್ತೀನ್ ಅಧ್ಯಕ್ಷ ಮೊಹಮ್ಮದ್ ಅಬ್ಬಾಸ್ ಅವರೊಂದಿಗೆ ದ್ವಿಪಕ್ಷೀಯ ಸಮಾಲೋಚನೆ ನಡೆಸಿದರು. ನಂತರ ಕುವೈತ್‌ನ ದೊರೆ ಸಬ್ ಅಲ್ ಕಾಲೀದ್ ಅಲ್ ಸಭಾ ಅವರೊಂದಿಗೆ ಚರ್ಚಿಸಿದರು. ಗೂಗಲ್ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುಂದರ್ ಪಿಚ್ಚೈ, ಅವರೊಂದಿಗೆ ಸಮಾಲೋಚನೆ ನಡೆಸಿದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಬೆಳಿಗ್ಗೆ ವಿಶ್ವಸಂಸ್ಥೆಯ ಸಾಮಾನ್ಯ ಅಧಿವೇಶನದ ನೇಪಥ್ಯದಲ್ಲಿ ನ್ಯೂಯಾರ್ಕ್‌ನಲ್ಲಿ ಕುವೈತ್‌ನ ಯುವರಾಜ ಶೇಖ್ ಸಬಾಹ್ ಅಲ್-ಖಾಲಿದ್ ಅಲ್-ಸಬಾಹ್ ಅವರೊಂದಿಗೆ ದ್ವಿಪಕ್ಷೀಯ ಸಮಾಲೊಚನೆ ನಡೆಸಿದರು. ಉಭಯ ನಾಯಕರು ಐತಿಹಾಸಿಕ ಸಂಬಂಧಗಳು ಮತ್ತು ಜನರ ಸಂಪರ್ಕಗಳಿಗೆ ಜನರನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಕುರಿತು ಚರ್ಚಿಸಿದರು. ಪ್ರಧಾನಿ ನರೇಂದ್ರ ಮೋದಿ ನೇಪಾಳದ ಪ್ರಧಾನಿ ಕೆ.ಪಿ. ಶರ್ಮಾ ಒಲಿ ಅವರ ಜೊತೆಯೂ ಸಮಾಲೋಚನೆ ನಡೆಸಿದರು. ಇಬ್ಬರೂ ನಾಯಕರು ಬಹುಮುಖಿ ಮತ್ತು ವಿಸ್ತರಿಸುತ್ತಿರುವ ಭಾರತ-ನೇಪಾಳ ಪಾಲುದಾರಿಕೆಯ ಎಲ್ಲಾ ಕ್ಷೇತ್ರಗಳಲ್ಲಿ ಸಹಕಾರವನ್ನು ವೃದ್ಧಿಸುವ ಕುರಿತಂತೆ ಪರಸ್ಪರ ಆಸಕ್ತಿಯ ವಿಷಯಗಳ ಕುರಿತು ಚರ್ಚಿಸಿದರು. ಪ್ರಧಾನ ಮಂತ್ರಿ ಮೋದಿ ಅವರು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ದುಂಡು ಮೇಜಿನ ಸಭೆಯಲ್ಲಿ ಉದ್ಯಮದ ಪ್ರಮುಖರೊಂದಿಗೆ ಬೆಳವಣಿಗೆಯಾಗುತ್ತಿರುವ ತಂತ್ರಜ್ಞಾನದ ಸಹಯೋಗದ ಕುರಿತು ಚರ್ಚಿಸಿದರು. ಪ್ರಧಾನಿ ಅವರು ಹೊಲ್ಟೆಕ್ ಇಂಟರ್‌ನ್ಯಾಶನಲ್‌ನ ಡಾ. ಕೃಷ್ಣ ಸಿಂಗ್ ಅವರ ಜೊತೆಯೂ ಚರ್ಚಿಸಿದರು.

<><*<><>*><>

ಅನಿವಾಸಿ ಭಾರತೀಯರ ಕೊಡುಗೆಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಅನಿವಾಸಿ ಭಾರತೀಯರು ರಾಷ್ಟ್ರದೂತರು. ಅವರು ಯಾವಾಗಲೂ ದೇಶದ ಪ್ರಬಲ ರಾಯಭಾರಿಗಳಾಗಿದ್ದಾರೆ ಎಂದು ಹೇಳಿದ್ದಾರೆ. ಕಳೆದ ರಾತ್ರಿ ನ್ಯೂಯಾರ್ಕ್‌ನ ಲಾಂಗ್ ಐಲ್ಯಾಂಡ್‌ನ ನಸ್ಸೌ ಕೊಲಿಜಿಯಂನಲ್ಲಿ ಭಾರತೀಯ ಸಮುದಾಯದ ದೊಡ್ಡ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಭಾರತ-ಅಮೆರಿಕ ದ್ವಿಪಕ್ಷೀಯ ಸಂಬಂಧಗಳಲ್ಲಿ ಭಾರತೀಯರ ಪಾತ್ರ ಅನನ್ಯ. ಕೃತಕ ಬುದ್ಧಿಮತ್ತೆಯು ಅಮೆರಿಕ-ಭಾರತೀಯರ ಮನೋಭಾವವನ್ನು ಪ್ರತಿನಿಧಿಸುತ್ತದೆ. ಭಾರತೀಯ ವಲಸಿಗರು ಅಮೆರಿಕವನ್ನು ಭಾರತಕ್ಕೆ ಮತ್ತು ಭಾರತವನ್ನು ಅಮೆರಿಕಕ್ಕೆ ಸಂಪರ್ಕಿಸಿದ್ದಾರೆ. ಅವರ ಕೌಶಲ್ಯ ಮತ್ತು ಪ್ರತಿಭೆಗೆ ಸಾಟಿಯಿಲ್ಲ. ತಮ್ಮ ಮನೆಯಲ್ಲಿ ಆತಿಥ್ಯ ನೀಡಿದ್ದಕ್ಕಾಗಿ ಅಮೆರಿಕ ಅಧ್ಯಕ್ಷ ಜೋ ಬೈಡನ್ ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದರು. ಅಮೆರಿಕದ ಬೋಸ್ಟನ್ ಮತ್ತು ಲಾಸ್ ಏಂಜಲೀಸ್‌ನಲ್ಲಿ ಎರಡು ಹೊಸ ಭಾರತೀಯ ರಾಯಭಾರಿ ಕಚೇರಿಗಳನ್ನು ತೆರೆಯಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಇದೇ ಸಂದರ್ಭದಲ್ಲಿ ಘೋಷಿಸಿದರು. ಈ ವಿಸ್ತರಣೆಯು ಅಮೆರಿಕಾದ್ಯಂತ ಭಾರತೀಯ ಸಮುದಾಯದೊಂದಿಗೆ ಬಾಂಧವ್ಯವನ್ನು ಬಲಪಡಿಸುವ ಭಾರತದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕ ಅಧ್ಯಕ್ಷ ಜೋ ಬೈಡೆನ್ ದ್ವಿಪಕ್ಷೀಯ ಸಮಾಲೊಚನೆ ನಡೆಸಿದರು. ತಮ್ಮ ಮಾತುಕತೆಯ ಸಮಯದಲ್ಲಿ ಹೊಸ ಸೆಮಿಕಂಡಕ್ಟರ್ ಫ್ಯಾಬ್ರಿಕೇಶನ್ ಪ್ಲಾಂಟ್ ಅನ್ನು ಸ್ಥಾಪಿಸುತ್ತಿರುವುದು ಶ್ಲಾಘನೀಯ. ಸೆಮಿಕಂಡಕ್ಟರ್ ಫ್ಯಾಬ್ರಿಕೇಶನ್ ಪ್ಲಾಂಟ್ ಅನ್ನು

ಸಾಮಾನ್ಯವಾಗಿ ಫ್ಯಾಬ್ ಎಂದು ಕರೆಯಲಾಗುತ್ತದೆ. ಇದು ರಾಷ್ಟ್ರೀಯ ಭದ್ರತೆ, ಮುಂದಿನ ಪೀಳಿಗೆಯ ದೂರಸಂಪರ್ಕ ಮತ್ತು ಹಸಿರು ಶಕ್ತಿಯೊಂದಿಗೆ ಸುಧಾರಿತ ಸಂವೇದನೆ, ಸಂವಹನ ಮತ್ತು ವಿದ್ಯುತ್, ವಿದ್ಯುನ್ಮಾನ ವಲಯಗಳ ಮೇಲೆ ಇವು ಕೇಂದ್ರೀಕೃತಗೊಂಡಿವೆ ಎಂದು ವಿದೇಶಾಂಗ ಸಚಿವಾಲಯ ಮಾಹಿತಿ ನೀಡಿದೆ. ಭಾರತದೊಂದಿಗೆ ಈ ಅಧಿಕ ಮೌಲ್ಯಯುತ ತಂತ್ರಜ್ಞಾನಗಳಿಗೆ ತಂತ್ರಜ್ಞಾನ ಪಾಲುದಾರಿಕೆಯನ್ನು ಮಾಡಲು ಅಮೆರಿಕ ಮಿಲಿಟರಿ ಒಪ್ಪಿಕೊಂಡಿರುವುದು ಇದೇ ಮೊದಲು. ಫ್ಯಾಬ್ ಭಾರತದ ಮೊದಲನೆಯದು ಮಾತ್ರವಲ್ಲ, ರಾಷ್ಟ್ರೀಯ ಭದ್ರತೆಗಾಗಿ ವಿಶ್ವದ ಮೊದಲ ಮಲ್ಟಿ ಮೆಟೀರಿಯಲ್ ಫ್ಯಾಬ್‌ಗಳಲ್ಲಿ ಒಂದಾಗಿದೆ. ಇದು ಆಧುನಿಕ ಯುದ್ಧದ ಹೋರಾಟಕ್ಕೆ ಮೂರು ಅಗತ್ಯ ಸ್ತಂಭಗಳ ಮೇಲೆ ಕೇಂದ್ರೀಕರಿಸುತ್ತದೆ ಎಂದು ಹೇಳಿದೆ.

<><*<><>*><>

ಕೇಂದ್ರ ಸರ್ಕಾರದ ಆಯುಷ್ಮಾನ್ ಭಾರತ್ ಆರೋಗ್ಯ ಯೋಜನೆಗೆ ೬ ವರ್ಷ ತುಂಬಿದೆ. ಶೇಕಡ ೪೯ ರಷ್ಟು ಮಹಿಳೆಯರಿಗೆ ಆಯುಷ್ಮಾನ್ ಭಾರತ್ ಕಾರ್ಡ್ ವಿತರಿಸಿದ್ದು, ೭ ಕೋಟಿ ೭೯ ಲಕ್ಷ ಮಂದಿ ಯೋಜನೆಯ ಸೌಲಭ್ಯ ಪಡೆದುಕೊಂಡಿದ್ದಾರೆ. ಈ ಪೈಕಿ ೩ ಕೋಟಿ ೬೧ ಲಕ್ಷ ಮಹಿಳೆಯರಿಗೆ ಆರೋಗ್ಯ ಸೌಲಭ್ಯ ದೊರಕಿದೆ. ಉತ್ತರಪ್ರದೇಶ, ಮಧ್ಯಪ್ರದೇಶ, ಬಿಹಾರ್ ಮತ್ತು ಮಹಾರಾಷ್ಟ್ರ ರಾಜ್ಯಗಳು ಯೋಜನೆಯನ್ನು ಸದ್ಬಳಕೆ ಮಾಡಿಕೊಳ್ಳುವಲ್ಲಿ ಅಗ್ರಸ್ಥಾನದಲ್ಲಿವೆ. ತಮಿಳುನಾಡು, ಕರ್ನಾಟಕ, ಆಂಧ್ರಪ್ರದೇಶ ಮತ್ತು ಕೇರಳ ರಾಜ್ಯಗಳು ಸಹ ಯೋಜನೆಯನ್ನು ಸೂಕ್ತ ರೀತಿಯಲ್ಲಿ ಬಳಸಿಕೊಂಡಿವೆ. ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನ್ ಆರೋಗ್ಯ ಯೋಜನೆಯಡಿ ಪ್ರತಿಯೊಂದು ಕುಟುಂಬಕ್ಕೆ ವಾರ್ಷಿಕ ೫ ಲಕ್ಷ ರೂಪಾಯಿವರೆಗೆ ಆರೋಗ್ಯ ಸೌಲಭ್ಯ ದೊರೆಯಲಿದ್ದು, ೧೨ ಕೋಟಿ ೩೭ ಲಕ್ಷ ಕುಟುಂಬಗಳ ೫೫ ಕೋಟಿ ಫಲಾನುಭವಿಗಳು ಯೋಜನೆಯನ್ನು ಬಳಸಿಕೊಂಡಿದ್ದಾರೆ. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಅಂಗನವಾಡಿ, ಆಶಾಕಾರ್ಯಕರ್ತೆಯರು, ಲಿಂಗತ್ವ ಅಲ್ಪ ಸಂಖ್ಯಾತರು, ಕಟ್ಟಡ ನಿರ್ಮಾಣ ಕಾರ್ಮಿಕರಿಗೂ ಸೌಲಭ್ಯ ಕಲ್ಪಿಸಲಾಗಿದೆ. ೭೦ ವರ್ಷ ವಯೋಮಿತಿಗೂ ಮೀರಿದ ೬ ಕೋಟಿ ಹಿರಿಯ ನಾಗರಿಕರೂ ಯೋಜನೆಯಿಂದ ಲಾಭ ಪಡೆದುಕೊಂಡಿದ್ದಾರೆ. ಯಾವುದೇ ಆದಾಯ ಮಿತಿಯ ಷರತ್ತು ಇಲ್ಲದಂತೆ ೭೦ ವರ್ಷ ಮೀರಿದ ಎಲ್ಲ ಹಿರಿಯ ನಾಗರಿಕರಿಗೆ ಈ ಯೋಜನೆಯ ಸೌಲಭ್ಯ ದೊರಕಿಸಿಕೊಡಲು ನಿರ್ಧರಿಸಲಾಗಿದ್ದು, ಇದಕ್ಕೆ ಮುಂದಿನ ತಿಂಗಳು ಪ್ರಧಾನಿ ನರೇಂದ್ರ ಮೋದಿ ಅವರು, ವಿಸ್ತರಿತ ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನ್ ಆರೋಗ್ಯ ಯೋಜನೆಯನ್ನು ಉದ್ಘಾಟಿಸಲಿದ್ದಾರೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ತಿಳಿಸಿದ್ದಾರೆ.

<><*<><>*><>

ಕೇಂದ್ರ ಸರಕಾರದ ಆಯುಷ್ಮಾನ್ ಭಾರತ್ ಯೋಜನೆ ಕರ್ನಾಟಕದಲ್ಲಿ ಜನಸಮೂಹದ ಆರೋಗ್ಯ ರಕ್ಷಣೆಗೆ ಹಲವು ರೀತಿಯಲ್ಲಿ ಉಪಯೋಗವಾಗುತ್ತಿದೆ. ಮೂತ್ರನಾಳದಲ್ಲಿ ಕಲ್ಲು, ವಾಹನದಿಂದ ಬಿದ್ದು ಗಾಯಗೊಂಡು ಶಸ್ತ್ರಚಿಕಿತ್ಸೆಯಾಗಬೇಕಾದ ಸಂದರ್ಭದಲ್ಲಿ ಆಯುಷ್ಮಾನ್ ಭಾರತ್ ತಮಗೆ ಯಾವುದೇ ಖರ್ಚಿಲ್ಲದೆ ತಿಂಗಳುಗಟ್ಟಲೆ ಉಚಿತ ಚಿಕಿತ್ಸೆ ಪಡೆಯಲು ಸಹಾಯ ಮಾಡಿದೆ ಎಂದು ಫಲಾನುಭವಿಗಳು ಯೋಜನೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಈ ಆರೋಗ್ಯ ಸೌಲಭ್ಯ ಖಾಯಿಲೆಗಳಿಂದ ದುಡಿಯುವ ಸಾಮರ್ಥ್ಯ ಕಳೆದುಕೊಂಡಿದ್ದ, ದುಬಾರಿ ದರದ ಚಿಕಿತ್ಸೆ ತಮ್ಮ ಕೈಗೆಟುಕದ ನಕ್ಷತ್ರ ಎಂದು ಕೊಂಡಿದ್ದ ಮಧ್ಯಮವರ್ಗದ ಜನ ಸೇರಿದಂತೆ ಅನೇಕ ಬಡ ಕುಟುಂಬಗಳಿಗೆ ಉಚಿತ ಚಿಕಿತ್ಸೆಯ ಸೌಲಭ್ಯವನ್ನು ಒದಗಿಸಿ ಕೊಟ್ಟು ತಮ್ಮ ಅನ್ನ ಸಂಪಾದಿಸುವ ದಾರಿಯನ್ನು ಅವರಿಗೆ ಮರಳಿ ದೊರಕಿಸಿಕೊಟ್ಟಿದೆ. ಕೋಡಿ ಹೊಸೂರಿನ ಯುವಕರೊಬ್ಬರಿಗೆ ಕಿಡ್ನಿಯಲ್ಲಿ ಕಲ್ಲು ಇದೆ ಎಂದು ವೈದ್ಯರು ಹೇಳಿದ್ದರು. ಈ ಯುವಕ ಆಯುಷ್ಮಾನ್ ಯೋಜನೆಯ ಮೂಲಕ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡು ಆರೋಗ್ಯವನ್ನು ಮರಳಿ ಪಡೆದಿರುವುದಾಗಿ ಹೇಳಿದ್ದಾರೆ. ಮೈಸೂರಿನ ಎಂ.ಜಿ. ಕೊಪ್ಪಲಿನ ನಿವಾಸಿ ಶಂಕರ್ ಕ್ಯಾನ್ಸರ್‌ಗೆ ಚಿಕಿತ್ಸೆ ಪಡೆಯಲು ಯೋಜನೆ ನೆರವಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಜಾರ್ಖಂಡ್ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ನೇತೃತ್ವದ ತಂಡ ಇಂದಿನಿಂದ ೨ ದಿನಗಳ ಕಾಲ ಚುನಾವಣಾ ಸನ್ನದ್ಧತೆ ಕುರಿತು ಪರಿಶೀಲನೆ ನಡೆಸುತ್ತಿದೆ. ಚುನಾವಣಾಯುಕ್ತರಾದ ಜ್ಞಾನೇಶ್ ಕುಮಾರ್ ಮತ್ತು ಸುಖ್‌ಬೀರ್ ಸಿಂಗ್ ಸಂಧು ನೇತೃತ್ವದ ತಂಡ ರಾಂಚಿಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಜೊತೆ ಸಮಾಲೋಚನೆ ನಡೆಸುತ್ತಿದೆ.

<><*<><>*><>

ಭಾರತ-ಆಸ್ಟ್ರೇಲಿಯಾ ಜಂಟಿ ಸಚಿವರ ೧೯ನೇ ಸಭೆಯಲ್ಲಿ ಪಾಲ್ಗೊಳ್ಳಲು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಇಂದಿನಿಂದ ಆಸ್ಟ್ರೇಲಿಯಾ ಪ್ರವಾಸ ಕೈಗೊಳ್ಳಲಿದ್ದಾರೆ. ಈ ಸಂದರ್ಭದಲ್ಲಿ ಅವರು, ಆಸ್ಟ್ರೇಲಿಯಾದ ವ್ಯಾಪಾರ ಮತ್ತು ಉದ್ಯಮ ಖಾತೆ ಸಚಿವ ಡಾನ್ ಫರೆಲ್ ಅವರನ್ನು ಬುಧವಾರ ಭೇಟಿ ಮಾಡಲಿದ್ದಾರೆ. ಮೂರು ದಿನಗಳ ತಮ್ಮ ಪ್ರವಾಸದಲ್ಲಿ ಪಿಯೂಶ್ ಗೋಯಲ್ ನಾಳೆ ಭಾರತ-ಫೆಸಿಫಿಕ್ ವಲಯದ ಆರ್ಥಿಕ ಚೌಕಟ್ಟು ರೂಪಿಸುವ ಸಭೆಯಲ್ಲಿ ಭಾಗಿಯಾಗಲಿದ್ದಾರೆ.

<><*<><>*><>

ಕೊಂಕಣ, ಗೋವಾ, ಮಧ್ಯ ಮಹಾರಾಷ್ಟ್ರ ಮತ್ತು ಮರಾಠವಾಡದಲ್ಲಿ ಇಂದು ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಮತ್ತು

ಉತ್ತರ ಒಳನಾಡಿನ, ಕರಾವಳಿ ಒಳನಾಡು, ಕೇರಳ, ಮಾಹೆ, ಯಾಣಂ, ಕರಾವಳಿ ಆಂಧ್ರಪ್ರದೇಶ, ರಾಯಲಸೀಮಾ ಮತ್ತು ತೆಲಂಗಾಣದಲ್ಲಿ ಇಂದು ಭಾರಿ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ. ಅಸ್ಸಾಂ, ಮೇಘಾಲಯ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ, ತ್ರಿಪುರ ಮತ್ತು ಒಡಿಶಾದಲ್ಲಿ ಇಂದು ಭಾರೀ ಮಳೆಯಾಗಲಿದೆ. ಪಶ್ಚಿಮ ಕೇಂದ್ರ, ಬಂಗಾಳಕೊಲ್ಲಿ ಮತ್ತು ನೆರೆಹೊರೆಯಲ್ಲಿ ಇಂದು ಕಡಿಮೆ ಒತ್ತಡದ ಪ್ರದೇಶ ರೂಪುಗಳ್ಳುವ ಸಾಧ್ಯತೆ ಇದೆ ಎಂದು ಐಎಂಡಿ ತಿಳಿಸಿದೆ.

<><*<><>*><>

ಹಂಗೇರಿಯಾ ಬುಡಪೆಸ್ಟ್‌ನಲ್ಲಿ ನಡೆದ ಚೆಸ್ ಒಲಿಂಪಿಯಾಡ್ -೨೦೨೪ ರಲ್ಲಿ ಭಾರತ ೨ ಚಿನ್ನದ ಪದಕಗಳನ್ನು ಗಳಿಸಿ ಐತಿಹಾಸಿಕ ಸಾಧನೆ ಮಾಡಿದೆ. ಮಹಿಳಾ ಮತ್ತು ಪುರುಷರ ತಂಡಗಳು ಅಗ್ರಸ್ಥಾನಕ್ಕೇರಿವೆ. ಅಂತಿಮ ಸುತ್ತಿನಲ್ಲಿ ಸ್ಲೋವೇನಿಯಾದ ಜನ್ ಸುಬೆಲ್ಜ್ ವಿರುದ್ಧ ಭಾರತದ ಅರ್ಜುನ್ ಇರಿಗೈಸಿ ಗೆಲುವು ಸಾಧಿಸಿದರು. ಮಹಿಳಾ ವಿಭಾಗದಲ್ಲಿ ಅಜಾರ್ ಬೈಜಾನ್ ವಿರುದ್ಧ ಭಾರತದ ಮಹಿಳಾ ತಂಡ ಗೆದ್ದು, ಸ್ವರ್ಣ ಪದಕವನ್ನು ಮುಡಿಗೇರಿಸಿಕೊಂಡಿದೆ. ಭಾರತದ ಈ ಸಾಧನೆಗೆ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ <>*><>